**National**
**Kannada**
**08.04.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಮುದ್ರಾ ಯೋಜನೆಯ ಫಲಾನುಭವಿಗಳೊಂದಿಗೆ ಪ್ರಧಾನಿ ಸಂವಾದ

೨. ದುಬೈ ರಾಜಕುಮಾರ ಶೇಖ್ ಹಮ್ದಾನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ

೩. ಭಾರತ- ಪೋರ್ಚುಗಲ್ ನಡುವೆ ನಿಯೋಗ ಮಟ್ಟದ ಮಾತುಕತೆ

೪. ಕೃಷಿ ವಲಯಕ್ಕೆ ಸಂಬಂಧಿಸಿದಂತೆ ದ್ವಿಪಕ್ಷೀಯ ಒಪ್ಪಂದಗಳಿಗೆ ಭಾರತ- ಇಸ್ರೇಲ್ ಸಹಿ

೫. ಐಪಿಎಲ್ ಟಿ-೨೦ ಕ್ರಿಕೆಟ್: ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಲಖನೌ ಸೂಪರ್ ಜೈಂಟ್ಸ್ ತಂಡಕ್ಕೆ ೪ ರನ್‌ಗಳ ರೋಚಕ ಜಯ

**<><*<><>*><>**

ಮುದ್ರಾ ಯೋಜನೆಯು ಮಹಿಳೆಯರಿಗೆ ಆರ್ಥಿಕ ನೆರವು ನೀಡುವುದಲ್ಲದೆ, ತಮ್ಮ ವ್ಯವಹಾರಗಳನ್ನು ಮುನ್ನಡೆಸಲು ಮತ್ತು ಬೆಳೆಸಲು ಅವಕಾಶಗಳನ್ನು ಸೃಷ್ಟಿಸುವ ಮೂಲಕ ಸಬಲೀಕರಣಗೊಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಪಿಎಂ ಮುದ್ರಾ ಯೋಜನೆ ಜಾರಿಯಾಗಿ ಇಂದಿಗೆ ೧೦ ವರ್ಷ ಪೂರ್ಣಗೊಂಡಿದೆ. ಈ ಹಿನ್ನೆಲೆಯಲ್ಲಿ ನವದೆಹಲಿಯ ತಮ್ಮ ನಿವಾಸದಲ್ಲಿ ಯೋಜನೆಯ ಫಲಾನುಭವಿಗಳೊಂದಿಗೆ ಅವರು ಸಂವಾದ ನಡೆಸಿದರು. ಮುದ್ರಾ ಸಾಲ ಯೋಜನೆಯು ಜೀವನ ಮತ್ತು ವೃತ್ತಿಜೀವನವನ್ನು ನಿರ್ಮಿಸಲು ಅವಕಾಶವನ್ನು ಒದಗಿಸುತ್ತದೆ ಮತ್ತು ನಿಧಿಯ ದುರುಪಯೋಗ ಅಥವಾ ಅನುತ್ಪಾದಕ ಪ್ರಯತ್ನಗಳನ್ನು ನಿರುತ್ಸಾಹಗೊಳಿಸುತ್ತದೆ ಎಂದು ಹೇಳಿದರು. ಮುದ್ರಾ ಯೋಜನೆಯಡಿಯಲ್ಲಿ ಭಾರತದ ನಾಗರಿಕರಿಗೆ ೩೩ ಲಕ್ಷ ಕೋಟಿ ರೂಪಾಯಿಗಳನ್ನು ಖಾತರಿಗಳ ಅಗತ್ಯವಿಲ್ಲದೆ ವಿತರಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಉದ್ಯೋಗ ಸೃಷ್ಟಿಸಲು ಮತ್ತು ಆರ್ಥಿಕತೆಯನ್ನು ಉತ್ತೇಜಿಸಲು ಹಣವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡಿರುವ ದೇಶದ ಪ್ರತಿಭಾನ್ವಿತ ಯುವಕರ ಮೇಲೆ ಅವರು ತಮ್ಮ ನಂಬಿಕೆಯನ್ನು ವ್ಯಕ್ತಪಡಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೫ ಸೆಕೆಂಡ್ಸ್ )

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ನವದೆಹಲಿಯಲ್ಲಿಂದು ದುಬೈ ರಾಜಕುಮಾರ, ಯುಎಇ ಉಪ ಪ್ರಧಾನಿ ಮತ್ತು ರಕ್ಷಣಾ ಸಚಿವ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಅಲ್ ಮಕ್ತೌಮ್ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತ-ದುಬೈ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ದುಬೈ ಪ್ರಮುಖ ಪಾತ್ರವಹಿಸಿದೆ. ಈ ವಿಶೇಷ ಭೇಟಿಯು ಭಾರತ-ಯುಎಇ ಆಳವಾದ ಬೇರೂರಿರುವ ಸ್ನೇಹವನ್ನು ಪುನರುಚ್ಚರಿಸುತ್ತದೆ ಮತ್ತು ಭವಿಷ್ಯದಲ್ಲಿ ಇನ್ನಷ್ಟು ಬಲವಾದ ಸಹಯೋಗಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಇದಕ್ಕೂ ಮುನ್ನ ದುಬೈ ರಾಜಕುಮಾರ, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ರಕ್ಷಣ ಸಚಿವ ರಾಜನಾಥ್ ಸಿಂಗ್ ಅವರೊಂದಿಗೆ ಸಭೆ ನಡೆಸಿದರು. ಉಭಯ ದೇಶಗಳ ನಡುವಿನ ವ್ಯಾಪಕ ಸಹಕಾರ ಮತ್ತು ಸಂಬಂಧಗಳ ಬಗ್ಗೆ ದುಬೈ ರಾಜಕುಮಾರನ ಸಕಾರಾತ್ಮಕ ಭಾವನೆಗಳಿಗೆ ಡಾ.ಎಸ್.ಜೈಶಂಕರ್ ಮೆಚ್ಚುಗೆ ವ್ಯಕ್ತಪಡಿಸಿದರು. ದುಬೈ ರಾಜಕುಮಾರನೊಂದಿಗೆ ಸಭೆಯು ಫಲಪ್ರದವಾಗಿತ್ತು. ಯುಎಇ ನೊಂದಿಗಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ಭಾರತಕ್ಕೆ ಆದ್ಯತೆಯಾಗಿದೆ. ಮುಂಬರುವ ವರ್ಷಗಳಲ್ಲಿ ರಕ್ಷಣಾ ಸಹಕಾರ, ಸಹ ಉತ್ಪಾದನೆ ಮತ್ತು ಸಹ ಅಭಿವೃದ್ಧಿ ಯೋಜನೆಗಳು ನಾವೀನ್ಯತೆ ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ನಿಕಟವಾಗಿ ಕೆಲಸ ಮಾಡಲು ಭಾರತ ಉತ್ಸುಕವಾಗಿದೆ. ಉಭಯ ದೇಶಗಳು ಈ ಪ್ರದೇಶದಲ್ಲಿ ಶಾಂತಿ ಮತ್ತು ಸಮೃದ್ಧಿಗಾಗಿ ಕೆಲಸ ಮಾಡಲು ಬದ್ಧವಾಗಿವೆ ಎಂದು ಸಾಮಾಜಿಕ ಜಾಲತಾಣದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ನವದೆಹಲಿಗೆ ಇಂದು ಆಗಮಿಸಿದ ದುಬೈ ರಾಜಕುಮಾರನನ್ನು ಸಚಿವ ಸುರೇಶ್ ಗೋಪಿ ಆತ್ಮೀಯವಾಗಿ ಬರಮಾಡಿಕೊಂಡರು. ದುಬೈ ರಾಜಕುಮಾರ ಆದ ನಂತರ ಇದು ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ.

**<><*<><>*><>**

ಭಾರತ ಮತ್ತು ಪೋರ್ಚುಗಲ್ ನಡುವೆ ಇಂದು ನಿಯೋಗಮಟ್ಟದ ಮಾತುಕತೆ ನಡೆಯಿತು. ಪೋರ್ಚುಗಲ್ ಭೇಟಿಯ ಎರಡನೇ ಮತ್ತು ಅಂತಿಮ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಪೋರ್ಚುಗಲ್ ಸಂಸತ್‌ನ ಸ್ಪೀಕರ್ ಜೋಸ್ ಫೆಡ್ರೊ ಅಗುಯರ್-ಬ್ರಾಂಕೊ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಇದೇ ವೇಳೆ ಪೋರ್ಚುಗಲ್ ಸಂಸತ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಗೌರವ ರಕ್ಷೆ ನೀಡಲಾಯಿತು. ಉಭಯ ನಾಯಕರ ನಡುವಿನ ಮಾತುಕತೆ ಫಲಪ್ರದವಾಗಿದೆ. ಭಾರತ-ಪೋರ್ಚುಗಲ್ ನಡುವಿನ ಸಂಬಂಧಗಳನ್ನು ಬಲಿಷ್ಠಗೊಳಿಸುವ ಮಾರ್ಗಗಳ ಬಗ್ಗೆ ಚರ್ಚಿಸಲಾಯಿತು. ಇದೇ ವೇಳೆ ಪೋರ್ಚುಗಲ್ ಸಂಸತ್‌ನ ಇತರೆ ಸದಸ್ಯರೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂವಹನ ನಡೆಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**<><*<><>*><>**

ಕೃಷಿ ವಲಯದಲ್ಲಿ ದ್ವಿಪಕ್ಷೀಯ ಸಹಕಾರಕ್ಕೆ ಸಂಬಂಧಿಸಿದ ಒಪ್ಪಂದಗಳಿಗೆ ಕೇಂದ್ರ ಕೃಷಿ ಹಾಗೂ ರೈತರ ಕಲ್ಯಾಣ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಹಾಗೂ ಇಸ್ರೇಲ್ ಕೃಷಿ ಸಚಿವ ಅವಿ ಡಿಕ್ಟರ್ ದೆಹಲಿಯಲ್ಲಿಂದು ಸಹಿ ಹಾಕಿದರು.

ಬಳಿಕ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಭಾರತ-ಇಸ್ರೇಲ್ ನಡುವಿನ ದ್ವಿಪಕ್ಷೀಯ ಪಾಲುದಾರಿಕೆ ಉತ್ತಮವಾಗಿದೆ. ಕೃಷಿ, ನಾವಿನ್ಯತೆ, ನೀರು ಹಾಗೂ ತಂತ್ರಜ್ಞಾನ ವಲಯದಲ್ಲಿ ಎರಡು ದೇಶಗಳು ಅತ್ಯುತ್ತಮ ಸಹಕಾರ ಹೊಂದಿವೆ ಎಂದು ಹೇಳಿದರು. ಭಾರತದಲ್ಲಿ ಭೂ-ಹಿಡುವಳಿ ಕಡಿಮೆಯಿದ್ದು, ಸಣ್ಣ ಹಿಡುವಳಿ ಹೊಂದಿರುವ ರೈತರಿಗೆ ಕೃಷಿ ಹೆಚ್ಚು ಲಾಭದಾಯಕವಾಗಿಸಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹಲವು ಪ್ರಯತ್ನಗಳನ್ನು ನಡೆಸುತ್ತಿದೆ ಎಂದು ವಿವರಿಸಿದರು. ಮುಂಬರುವ ವರ್ಷಗಳಲ್ಲಿ ಆಹಾರ ಭದ್ರತಾ ಸವಾಲುಗಳನ್ನು ಎದುರಿಸುವ ಕಾರ್ಯತಂತ್ರಗಳ ಕುರಿತು ಸಭೆಯಲ್ಲಿ ರಚನಾತ್ಮಕ ಚರ್ಚೆ ನಡೆಸಲಾಯಿತು. ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಗ್ಗಿಸುವ, ಹೆಚ್ಚುತ್ತಿರುವ ತಾಪಮಾನದ ನಡುವೆಯೂ ಹೆಚ್ಚು ಇಳುವರಿ ಖಚಿತಪಡಿಸುವ ಬಿತ್ತನೆ ಬೀಜಗಳನ್ನು ಅಭಿವೃದ್ಧಿ ಪಡಿಸುವತ್ತ ಗಮನ ಹರಿಸಲಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

**<><*<><>*><>**

ಎಲೆಕ್ಟ್ರಾನಿಕ್ಸ್ ಬಿಡಿ ಭಾಗಗಳ ಉತ್ಪಾದನೆ ಯೋಜನೆಗೆ ಇಂದು ಅಧಿಸೂಚನೆ ಹೊರಡಿಸಲಾಗುವುದು ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಎಲೆಕ್ಟ್ರಾನಿಕ್ಸ್ ಪೂರೈಕೆ ಸರಪಳಿಯಲ್ಲಿ ಭಾರತವನ್ನು ಸ್ವಾವಲಂಬಿಯಾಗಿಸಲು ೨೨ ಸಾವಿರದ ೯೧೯ ಕೋಟಿ ರೂಪಾಯಿಗಳ ನಿಧಿಯೊಂದಿಗೆ ಈ ಯೋಜನೆಗೆ ಕೇಂದ್ರ ಸಚಿವ ಸಂಪುಟ ಇತ್ತೀಚೆಗೆ ಅನುಮೋದನೆ ನೀಡಿದೆ ಎಂದರು. ಅಧಿಸೂಚನೆ ಹೊರಡಿಸಿದ ನಂತರ ಯೋಜನೆಯ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ರೂಪಿಸಲು ಕೈಗಾರಿಕೆಗಳೊಂದಿಗೆ ಸಮಾಲೋಚನೆ ನಡೆಸುವ ಪ್ರಕ್ರಿಯೆಯು ಪ್ರಾರಂಭವಾಗಲಿದೆ. ಕೆಲವೇ ವಾರಗಳಲ್ಲಿ ಯೋಜನೆಯಡಿ ಅರ್ಜಿಗಳನ್ನು ಸ್ವೀಕರಿಸಲು ಪೋರ್ಟಲ್ ತೆರೆಯಲಾಗುವುದು ಎಂದು ತಿಳಿಸಿದರು. ಕಳೆದ ಹತ್ತು ವರ್ಷಗಳಲ್ಲಿ ದೇಶವು ಎಲೆಕ್ಟ್ರಾನಿಕ್ಸ್ ವಲಯದಲ್ಲಿ ಗಮನಾರ್ಹ ಬೆಳವಣಿಗೆಯನ್ನು ದಾಖಲಿಸಿದೆ. ಎಲೆಕ್ಟ್ರಾನಿಕ್ಸ್ ಉತ್ಪಾದನೆ ಐದು ಪಟ್ಟು ಹೆಚ್ಚಾಗಿದೆ ಮತ್ತು ಎಲೆಕ್ಟ್ರಾನಿಕ್ಸ್ ರಫ್ತು ಆರು ಪಟ್ಟು ಬೆಳವಣಿಗೆ ದಾಖಲಿಸಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

**<><*<><>*><>**

'ಒಂದು ರಾಜ್ಯ, ಒಂದು ಆರ್‌ಆರ್‌ಬಿ' ತತ್ವದ ಮೇಲೆ ೨೬ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್- ಆರ್‌ಆರ್‌ಬಿ ಗಳ, ವಿಲೀನಕ್ಕೆ ಹಣಕಾಸು ಸೇವೆಗಳ ಇಲಾಖೆ- ಡಿಎಫ್‌ಎಸ್ ಆದೇಶ ಹೊರಡಿಸಿದೆ. ಇದು ಆರ್‌ಆರ್‌ಬಿ ಗಳ ವಿಲೀನದ ನಾಲ್ಕನೇ ಹಂತವಾಗಿದೆ. ಹಿಂದೆ ನಡೆದ ವಿಲೀನಗಳಿಂದಾಗಿ ಆರ್‌ಆರ್‌ಬಿ ಗಳ ದಕ್ಷತೆಯಲ್ಲಿನ ಸುಧಾರಣೆ ಪರಿಗಣಿಸಿ, ಹಣಕಾಸು ಸಚಿವಾಲಯವು ಕಳೆದ ವರ್ಷ ನವೆಂಬರ್‌ನಲ್ಲಿ ವಿಲೀನ ಯೋಜನೆಯನ್ನು ರೂಪಿಸಿತ್ತು. ವಿಲೀನದ ನಂತರ ೨೬ ರಾಜ್ಯಗಳು ಮತ್ತು ಎರಡು ಕ್ರೇಂದ್ರಾಡಳಿತಗಳಲ್ಲಿ ಒಟ್ಟು ೨೮ ಆರ್‌ಆರ್‌ಬಿ ಗಳು ಇರಲಿವೆ. ೭೦೦ ಜಿಲ್ಲೆಗಳನ್ನು ಒಳಗೊಂಡ ೨೨ ಸಾವಿರಕ್ಕೂ ಹೆಚ್ಚು ಶಾಖೆಗಳಿವೆ.

**<><*<><>*><>**

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಹಾಗೂ ವೇವ್‌ಲ್ಯಾಪ್ಸ್ ಸಂಸ್ಥೆಯ ಸಹಯೋಗದೊಂದಿಗೆ ಆಯೋಜಿಸುತ್ತಿರುವ ಎಕ್ಸ್‌ಆರ್ ಕ್ರಿಯೇಟರ್ ಹ್ಯಾಕಥಾನ್, ಮೌಲ್ಯಮಾಪನದ ಅಂತಿಮ ಹಂತ ತಲುಪಿದ್ದು, ವಿಜೇತರಿಗೆ ಬಹುಮಾನ ವಿತರಣೆ ಸಮಾರಂಭ ನಾಳೆ ನಡೆಯಲಿದೆ. ಈ ಹ್ಯಾಕಥಾನ್ ಮುಂದಿನ ತಿಂಗಳ ೧ ರಿಂದ ೪ ರವರೆಗೆ ಮುಂಬೈನಲ್ಲಿ ನಡೆಯಲಿರುವ ವಿಶ್ವ ದೃಶ್ಯ-ಶ್ರವಣ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ನ ಒಂದು ಭಾಗವಾಗಿದೆ. ಎಕ್ಸ್ ಆರ್ ಕ್ರಿಯೇಟರ್ ಹ್ಯಾಕಥಾನ್ ವಿಸ್ತೃತ ರಿಯಾಲಿಟಿ ತಂತ್ರಜ್ಞಾನಗಳಲ್ಲಿ

ನಾವೀನ್ಯತೆಯನ್ನು ಉತ್ತೇಜಿಸುವ ರಾಷ್ಟ್ರವ್ಯಾಪಿ ಉಪಕ್ರಮವಾಗಿದ್ದು, ದೇಶಾದ್ಯಂತದ ೧೫೦ ಕ್ಕೂ ಹೆಚ್ಚು ನಗರಗಳಿಂದ ೨ ಸಾವಿರದ ೨೦೦ ಕ್ಕೂ ಹೆಚ್ಚು ಭಾಗವಹಿಸುವಿಕೆಯನ್ನು ಕಂಡಿದೆ.

<><*<><>*><>

ದೇಶವನ್ನು ಇಂದು ಜಾಗತಿಕ ಕಡಲ ಶಕ್ತಿ ಕೇಂದ್ರವನ್ನಾಗಿ ಪರಿವರ್ತಿಸುವ ಪ್ರಯತ್ನಗಳಲ್ಲಿ ಕೇಂದ್ರ ಸರ್ಕಾರವು ದೃಢವಾಗಿದೆ. ವಿಶಾಲವಾದ ಕರಾವಳಿ ಮತ್ತು ಕಾರ್ಯತಂತ್ರದ ಸ್ಥಾನವನ್ನು ಹೊಂದಿರುವ ಭಾರತವು ಕಡಲ ವಲಯದಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗ ಸಚಿವ ಸರ್ಬಾನಂದ್ ಸೋನೊವಾಲ್ ತಿಳಿಸಿದ್ದಾರೆ. ಕೊಚ್ಚಿಯ ಭಾರತೀಯ ಕಡಲ ವಿಶ್ವವಿದ್ಯಾಲಯದ ಆವರಣದಲ್ಲಿ ಬಾಲಕಿಯ ಹಾಸ್ಟೆಲ್ ಮತ್ತು ಗ್ರಂಥಾಲಯ ಕಟ್ಟಡಕ್ಕೆ ಅಡಿಪಾಯ ಹಾಕಿ ನಂತರ ಮಾತನಾಡಿದ ಅವರು, ದೇಶದ ಸಮುದ್ರ ಪ್ರಯಾಣಿಕರ ಸಂಖ್ಯೆಯಲ್ಲಿ ಗಣನೀಯ ಏರಿಕೆ ಕಂಡಿದೆ. ಕಳೆದ ವರ್ಷ ಒಟ್ಟು ೩ ಲಕ್ಷದ ೧೭ ಸಾವಿರಕ್ಕೂ ಹೆಚ್ಚು ಪ್ರಯಾಣಿಕರು ಸಮುದ್ರ ಪ್ರಯಾಣ ಮಾಡಿದ್ದಾರೆ ಎಂದು ಮಾಹಿತಿ ನೀಡಿದರು.

<><*<><>*><>

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆದ ಇಂಡಿಯನ್ ಪ್ರಿಮೀಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್‌ನ ದಿನದ ಮೊದಲ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ವಿರುದ್ಧ ಲಖನೌ ಸೂಪರ್ ಜೈಂಟ್ಸ್ ತಂಡ ೪ ರನ್‌ಗಳಿಂದ ರೋಚಕ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಲಖನೌ ಸೂಪರ್ ಜೈಂಟ್ಸ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೩೮ ರನ್ ಮಾಡಿತು. ಈ ಗುರಿಯನ್ನು ಬೆನ್ನತ್ತಿದ ಕೊಲ್ಕತ್ತಾ ನೈಟ್ ರೈಡರ್ಸ್, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೩೪ ರನ್‌ಗಳಿಸಿ ಪರಾಭವಗೊಂಡಿತು.

ಚಂಡಿಘಡದ ಮಹಾರಾಜ ಯದುವಿಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮತ್ತೊಂದು ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>